ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು.
ದಿನಾಂಕ: 13.07.2023.

ಸಂಖ್ಯೆ: ಕಾಶಿಇ:ಶೈವಿ:218:ಸ್ಕೌಟ್ಸ್ & ಗೈಡ್ಸ್/2020-21
(ಭಾಗ-2)

## ಅಧಿಕೃತ ಜ್ಞಾಪನ

ವಿಷಯ: ರಾಜ್ಯ ಮಟ್ಟದ ಮುಂದುವರೆದ ತರಬೇತಿಗೆ ರೇಂಜರ್ ಲೀಡರ್ಸ್ ಮತ್ತು ರೋವರ್ ಸ್ಕೌಟ್ ಲೀಡರ್ಸ್‌ಗಳ ಶಿಬಿರಾರ್ಥಿಗಳನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: ರಾಜ್ಯ ಕಾರ್ಯದರ್ಶಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರವರ ಪತ್ರ ಸಂಖ್ಯೆ:ಎಸ್‌ಹೆಚ್‌ಕ್ಯೂ/ತ.1/ರೋ.ಸ್ಕೌ.ರೆ.ಲೀ.ಮೂ.ತ.ಶಿ-16/023-24/756 dt:07.07.2023.

********

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಡ್ಡಾಯವಾಗಿ ಭಾರತ್ ಸ್ಕೌಟ್ಸ್ & ಗೈಡ್ಸ್ ಘಟಕಗಳನ್ನು ಸ್ಥಾಪಿಸಿ ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ ಹಾಗೂ ಈ ಘಟಕಗಳನ್ನು ನಿರ್ವಹಿಸಲು ತರಬೇತಿ ಪಡೆದ ಅಧ್ಯಾಪಕರುಗಳಿಗೆ ಜವಾಬ್ದಾರಿ ನೀಡಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಭಾರತ್ ಸ್ಕೌಟ್ಸ್ & ಗೈಡ್ಸ್, ಕರ್ನಾಟಕ ರಾಜ್ಯ ಸಂಸ್ಥೆಯ ವತಿಯಿಂದ ದಿನಾಂಕ: 24.07.2023 ರಿಂದ 30.07.2023 ರವರೆಗೆ ಡಾ:ಅನಿಬೆಸೆಂಟ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಕೊಂಡಜ್ಜಿ ಬಸಪ್ಪ ಸ್ಕೌಟ್ಸ್ ಮತ್ತು ಗೈಡ್ಸ್, ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಕೊಂಡಜ್ಜಿ, ದಾವಣಗೆರೆ ಜಿಲ್ಲೆ ಇಲ್ಲಿ ರಾಜ್ಯ ಮಟ್ಟದ ರೇಂಜರ್ ಲೀಡರ್ಸ್ ಮತ್ತು ರೋವರ್ ಸ್ಕೌಟ್ ಲೀಡರ್ಸ್‌ಗಳ ಮುಂದುವರೆದ (Advanced) ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ. ಸದರಿ ರಾಜ್ಯಮಟ್ಟದ ಮುಂದುವರೆದ (Advanced) ತರಬೇತಿಗೆ ಈಗಾಗಲೇ ಮೂಲ ತರಬೇತಿ ಪಡೆದಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ರೇಂಜರ್ ಲೀಡರ್ಸ್ ಮತ್ತು ರೋವರ್ ಸ್ಕೌಟ್ ಲೀಡರ್ಸ್‌ಗಳು ಹಾಜರಾಗಲು ಸೂಚಿಸಲಾಗಿದೆ ಹಾಗೂ ಸದರಿ ಅವಧಿಗೆ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸದರಿ ತರಬೇತಿಯಲ್ಲಿ ಭಾಗವಹಿಸುವ ಅಧ್ಯಾಪಕರುಗಳನ್ನು ಕಡ್ಡಾಯವಾಗಿ ತರಬೇತಿಯ ಹಿಂದಿನ ದಿನವೇ ಬಿಡುಗಡೆಗೊಳಿಸುವಂತೆ ಸೂಚಿಸಲಾಗಿದೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ರಾಜ್ಯ ಕಾರ್ಯದರ್ಶಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ರಾಜ್ಯ ಕೇಂದ್ರ ಕಾರ್ಯಾಲಯ, # 39, ಶಾಂತಿಗೃಹ, ಅರಮನೆ ರಸ್ತೆ, ಬೆಂಗಳೂರು – 560 001.
3. ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯಾಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
4. ಶ್ರೀ ಆರ್.ಶ್ರೀಕಾಂತ್, ಸಮನ್ವಯಾಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
5. ಕಛೇರಿ ಪ್ರತಿ.